**Akashvani : Bangalore**
**Regional Bulletin In Kannada**
**27.10.2025 / 2.30 pm**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**27.10.2025 / 2.30 pm**

**<><*<><>*><>**

ಮುಖ್ಯಾಂಶಗಳು

೧. ತೆರಿಗೆ ಪಾವತಿಸುವವರ ಬಿಪಿಎಲ್ ಕಾರ್ಡ್‌ಗಳು ಎಪಿಎಲ್ ಆಗಿ ಬದಲಾವಣೆ - ಆಹಾರ ಸಚಿವ ಕೆ.ಎಚ್. ಮುನಿಯಪ್ಪ ಸ್ಪಷ್ಟನೆ

೨. ಪರಿಸರ ಸಂರಕ್ಷಣೆಯಲ್ಲಿ ರಾಜ್ಯಕ್ಕೆ ಮೊದಲ ಸ್ಥಾನ - ಸಚಿವ ಈಶ್ವರ್ ಖಂಡ್ರೆ

೩. ಡಿಜಿಟಲ್ ಬಂಧನ ಪ್ರಕರಣ; ಎಫ್‌ಐಆರ್ ಮಾಹಿತಿ ಸಲ್ಲಿಸುವಂತೆ ಎಲ್ಲಾ ರಾಜ್ಯಗಳಿಗೆ ಸುಪ್ರೀಂಕೋರ್ಟ್ ಸೂಚನೆ

೪. ಸುರಂಗ ರಸ್ತೆ ಯೋಜನೆಯಿಂದ ಬೆಂಗಳೂರಿನ ಜಲಮೂಲಕ್ಕೆ ಧಕ್ಕೆ - ಪ್ರತಿಪಕ್ಷ ನಾಯಕ ಆರ್.ಅಶೋಕ ಕಳವಳ

೫. ಮೋಂಥಾ ಚಂಡಮಾರುತ ಹಿನ್ನೆಲೆ; ಇಂದು ಕರಾವಳಿ ಸೇರಿದಂತೆ ರಾಜ್ಯದ ಹಲವೆಡೆ ಭಾರೀ ಮಳೆ ಸಂಭವ

***************

ಕಾಳಸಂತೆಯಲ್ಲಿ ರೇಷನ್ ಅಕ್ಕಿ ಮಾರಾಟವಾಗುತ್ತಿರುವುದಕ್ಕೆ ಕಡಿವಾಣ ಹಾಕಲು ಅಗತ್ಯಕ್ರಮ ಕೈಗೊಳ್ಳಲಾಗುವುದು ಎಂದು ಆಹಾರ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ. ಶಿವಮೊಗ್ಗದಲ್ಲಿ ಮಾತನಾಡಿದ ಅವರು, ಯಾವುದೇ ಕಾರ್ಡ್‌ಗಳು ರದ್ದಾಗುತ್ತಿಲ್ಲ. ತೆರಿಗೆ ಕಟ್ಟುತ್ತಿರುವವರಿಗೆ ಮಾತ್ರ ಬಿಪಿಎಲ್ ಕಾರ್ಡ್‌ನಿಂದ ಎಪಿಎಲ್ ಕಾರ್ಡ್‌ಗಳಾಗಿ ಬದಲಾವಣೆಯಾಗುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಬಿಪಿಎಲ್ ಕಾರ್ಡ್‌ಗಳ ಮಾನದಂಡ ಪರಿಷ್ಕರಣೆಯ ಬಗ್ಗೆ ಚರ್ಚೆ ನಡೆಯುತ್ತಿದ್ದು, ಮುಂದಿನ ದಿನಗಳಲ್ಲಿ ಕೆಲವು ಮಾನದಂಡಗಳನ್ನು ಸರಳೀಕರಣಗೊಳಿಸಲಾಗುವುದು ಎಂದು ಹೇಳಿದ್ದಾರೆ.

ಧ್ವನಿ : ಕೆ.ಎಚ್.ಮುನಿಯಪ್ಪ, ಆಹಾರ ಸಚಿವ ( 27 ಸೆಕೆಂಡುಗಳು)

***************

ಪರಿಸರ ಸಂರಕ್ಷಣೆಯಲ್ಲಿ ರಾಜ್ಯ ಪ್ರಥಮ ಸ್ಥಾನದಲ್ಲಿದೆ ಎಂದು ಅರಣ್ಯ ಇಲಾಖೆ ಸಚಿವ ಈಶ್ವರ್ ಖಂಡ್ರೆ ತಿಳಿಸಿದ್ದಾರೆ. ಮೈಸೂರಿನಲ್ಲಿ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ೫೦ನೇ ವರ್ಷದ ಸುವರ್ಣ ಮಹೋತ್ಸವದ

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪರಿಸರ ಸಂರಕ್ಷಣೆಗೆ ಮುಂದಾಗಿರುವ ಸರ್ಕಾರ ೧೧ ಕೋಟಿ ಸಸಿಗಳನ್ನು ನೆಡುವ ಮೂಲಕ ಹಸಿರುಕರಣಕ್ಕೆ ಒತ್ತು ನೀಡಿದೆ ಎಂದು ಹೇಳಿದ್ದಾರೆ. ಮಾನವ ಹಾಗೂ ವನ್ಯಜೀವಿ ಸಂಘರ್ಷ ತಡೆಯಲು ಅರಣ್ಯ ಇಲಾಖೆ ಮುಂದಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ನಂತರ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಡಾ ಹೆಚ್. ಸಿ. ಮಹದೇವಪ್ಪ ಪರಿಸರ ಉಳಿಸುವ ಜವಾಬ್ದಾರಿ ಎಲ್ಲರ ಮೇಲಿದೆ, ಯುವ ಜನತೆ ಹೆಚ್ಚಿನ ಮುತುವರ್ಜಿ ವಹಿಸಿ ಪರಿಸರ ಉಳಿಸುವ ಕಾರ್ಯ ಮಾಡಬೇಕಿದೆ ಎಂದು ಕಿವಿಮಾತು ಹೇಳಿದ್ದಾರೆ. ಕಾರ್ಯಕ್ರಮದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಈಶ್ವರ್ ಖಂಡ್ರೆ, ಮೈಸೂರು ಜಿಲ್ಲೆ ಸರಗೂರು ತಾಲ್ಲೂಕಿನ ಮುಳ್ಳೂರು ಗ್ರಾಮದಲ್ಲಿ ಹುಲಿ ದಾಳಿಯಿಂದ ಮೃತಪಟ್ಟ ರೈತ ರಾಜಶೇಖರ ಕುಟುಂಬಕ್ಕೆ ೨೦ ಲಕ್ಷ ರೂಪಾಯಿ ಪರಿಹಾರ ನೀಡಲಾಗುವುದು ಎಂದು ತಿಳಿಸಿದ್ದಾರೆ.

***************

ಡಿಜಿಟಲ್ ಬಂಧನ ಪ್ರಕರಣಕ್ಕೆ ಸಂಬಂಧಿಸಿದಂತೆ ದಾಖಲಿಸಲಾದ ಎಫ್ಐಆರ್ ಮಾಹಿತಿಯನ್ನು ಸಲ್ಲಿಸುವಂತೆ ಎಲ್ಲಾ ರಾಜ್ಯಗಳಿಗೆ ಸುಪ್ರೀಂಕೋರ್ಟ್ ನೋಟೀಸ್ ಜಾರಿ ಮಾಡಿದೆ. ಎಲ್ಲಾ ಪ್ರಕರಣಗಳ ತನಿಖೆಯನ್ನು ಕೇಂದ್ರ ತನಿಖಾ ದಳಕ್ಕೆ ಹಸ್ತಾಂತರಿಸುವ ಬಗ್ಗೆಯೂ ನ್ಯಾಯಾಲಯ ಚಿಂತನೆ ನಡೆಸಿದೆ. ಈ ಪ್ರಕರಣಗಳಿಗೆ ಸಂಬಂಧಿಸಿದಂತೆ ದೇಶಾದಾದ್ಯಂತ ಎಲ್ಲಾ ಪ್ರಕರಣಗಳನ್ನು ನಿರ್ವಹಿಸಲು ತನ್ನ ಬಳಿ ಸಂಪನ್ಮೂಲಗಳಿವೆಯೇ ಎಂದು ಉತ್ತರಿಸುವಂತೆ ಸುಪ್ರೀಂಕೋರ್ಟ್ ಸಿಬಿಐಗೆ ಕೇಳಿದೆ. ಡಿಜಿಟಲ್ ಅರೆಸ್ಟ್ ಪ್ರಕರಣಗಳು ಮ್ಯಾನ್ಮಾರ್ ಹಾಗೂ ಥೈಲ್ಯಾಂಡ್‌ನಿಂದ ನಿರ್ವಹಿಸಲಾಗುತ್ತಿದೆ. ಹೀಗಾಗಿ ಎಲ್ಲಾ ರಾಜ್ಯಗಳಲ್ಲಿ ದಾಖಲಾಗಿರುವ ಇಂತಹ ವಂಚನೆ ಪ್ರಕರಣಗಳನ್ನು ಕೂಡಲೇ ಸಿಬಿಐಗೆ ಹಸ್ತಾಂತರಿಸಬೇಕು ಎಂದು ಸುಪ್ರೀಂಕೋರ್ಟ್ ರಾಜ್ಯಗಳಿಗೆ ತಿಳಿಸಿದೆ. ಪೊಲೀಸ್ ಇಲಾಖೆ ಅಲ್ಲದೆ ಹೊರಗಿನ ಸೈಬರ್ ತಜ್ಞರ ಅಗತ್ಯವಿದ್ದಲ್ಲಿ ತಿಳಿಸುವಂತೆಯೂ ನ್ಯಾಯಾಲಯ ಹೇಳಿದೆ.

***************

ಧರ್ಮಸ್ಥಳ ಪ್ರಕರಣ ಕುರಿತಂತೆ ವಿಶೇಷ ತನಿಖಾ ತಂಡ ಇದೇ ೩೧ ರೊಳಗೆ ವರದಿ ಸಲ್ಲಿಸುವ ಸಾಧ್ಯತೆ ಇದೆ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಕ್ಟೋಬರ್ ಅಂತ್ಯದೊಳಗೆ ವರದಿ ಸಲ್ಲಿಸುವುದಾಗಿ ಎಸ್ಐಟಿ ತಿಳಿಸಿದೆ. ಸಮಗ್ರ ಹಾಗೂ ಅಂತಿಮ ವರದಿಯನ್ನು ಸಲ್ಲಿಸಲು ಎಸ್ಐಟಿಗೆ ಸೂಚಿಸಲಾಗಿದೆ ಎಂದು ಹೇಳಿದ್ದಾರೆ. ಈ ನಡುವೆ ಮಹೇಶ್ ಶೆಟ್ಟಿ ತಿಮರೋಡಿ, ಗಿರೀಶ್ ಮಟ್ಟಣ್ಣನವರ್ ಮತ್ತು ಟಿ.ಜಯಂತ್ ಅವರಿಗೆ ಎಸ್ಐಟಿ ನೋಟಿಸ್ ಜಾರಿ ಮಾಡಿದ್ದು, ಇಂದು ತನಿಖಾಧಿಕಾರಿಯ ಮುಂದೆ ಹಾಜರಾಗುವಂತೆ ಸೂಚಿಸಿದೆ.

***************

ಬೆಂಗಳೂರಿನ ಸುರಂಗ ರಸ್ತೆ ಯೋಜನೆ ಸಂಬಂಧ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಿರ್ಧಾರದ ವಿರುದ್ಧ ಪ್ರತಿಪಕ್ಷ ನಾಯಕ ಆರ್.ಆಶೋಕ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್

ಮಾಡಿರುವ ಅವರು, ಇಷ್ಟೆಲ್ಲಾ ಭಾದಕಗಳಿರುವ ಸುರಂಗ ರಸ್ತೆಯನ್ನು ಮಾಡಿಯೇ ತೀರುತ್ತೇನೆ ಎಂಬ ಹಠಕ್ಕೆ ಯಾಕೆ ಬಿದ್ದಿದ್ದೀರಿ ಎಂದು ಪ್ರಶ್ನಿಸಿದ್ದಾರೆ. ಬೆಂಗಳೂರಿನ ಪರಿಸರಕ್ಕೆ ಅಪಾಯ ತಂದೊಡ್ಡುವ ಅವೈಜ್ಞಾನಿಕ ಯೋಜನೆಯನ್ನು ಒಪ್ಪಲು ಸಾಧ್ಯವೇ ಇಲ್ಲ ಎಂದು ತಿಳಿಸಿದ್ದಾರೆ. ಸುರಂಗ ರಸ್ತೆ ಯೋಜನೆಯಿಂದ ಜಲಮೂಲ, ಅಂತರ್ಜಲ, ಕೊಳವೆ ಬಾವಿಗೆ ಧಕ್ಕೆಯಾಗಲಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

***************

ಕೊಪ್ಪಳ ಜಿಲ್ಲೆಯ ಕಾರಟಗಿ ತಾಲ್ಲೂಕಿನಲ್ಲಿ ಮಳೆಯ ಹೊಡೆತಕ್ಕೆ ಭತ್ತದ ಬೆಳೆ ಅಪಾರ ಪ್ರಮಾಣದಲ್ಲಿ ನಾಶವಾಗಿದೆ. ಹಾನಿಯ ಸಮಗ್ರ ವರದಿ ನೀಡುವಂತೆ ಕಂದಾಯ ಮತ್ತು ಕೃಷಿ ಅಧಿಕಾರಿಗಳಿಗೆ ಸೂಚಿಸಲಾಗಿದ್ದು, ವರದಿ ಕೈ ಸೇರಿದ ಬಳಿಕ ರೈತರಿಗೆ ಪರಿಹಾರ ಒದಗಿಸಲಾಗುವುದು ಎಂದು ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ತಿಳಿಸಿದ್ದಾರೆ. ಕಾರಟಗಿ ಹೋಬಳಿಯ ೮೦ ಹೆಕ್ಟೇರ್, ಸಿದ್ದಾಪುರ ಹೋಬಳಿ ವ್ಯಾಪ್ತಿಯ ೮೫೮ ಹೆಕ್ಟೇರ್ ಪ್ರದೇಶದಲ್ಲಿನ ಭತ್ತದ ಬೆಳೆ ಹಾನಿಗೀಡಾಗಿರುವುದು ಪ್ರಾಥಮಿಕ ವರದಿಯಿಂದ ತಿಳಿದಿದೆ ಎಂದು ಹೇಳಿದ್ದಾರೆ.

***************

ಚಿಕ್ಕಮಗಳೂರು ಜಿಲ್ಲೆಯಲ್ಲಿ ನಿನ್ನೆ ಸಂಜೆಯಿಂದ ಗಾಳಿ ಸಹಿತ ಮಳೆಯಾಗುತ್ತಿದೆ. ಇಂದು ಕೂಡ ಚಿಕ್ಕಮಗಳೂರು, ಮೂಡಿಗೆರೆ , ತರೀಕೆರೆ ತಾಲೂಕು ಸೇರಿ ಹಲವೆಡೆ ಸಾಧಾರಣ ಮಳೆ ಮುಂದುವರೆದಿದೆ. ನಿರಂತರ ಮಳೆಯ ಕಾರಣ ಜಿಲ್ಲೆಯ ಕಾಫಿ, ಅಡಿಕೆ, ತರಕಾರಿ ಬೆಳೆಗಳಿಗೆ ಹಾನಿಯುಂಟಾಗಿದೆ. ಜಿಲ್ಲೆಯ ಚಂದ್ರದ್ರೋಣ ಪರ್ವತ ಶ್ರೇಣಿಯ ಮುಳ್ಳಯ್ಯನಗಿರಿ ಕೆಮ್ಮಣ್ಣುಗುಂಡಿ, ಮಲ್ಲೇನಹಳ್ಳಿ ಸುತ್ತ ಮುತ್ತಲಿನ ಕೆಲ ತೋಟಗಳಲ್ಲಿ ಮಳೆಯಿಂದ ಕಾಫಿಗೆ ಕೊಳೆ ರೋಗ ಕಂಡುಬಂದಿದೆ. ಹಲವೆಡೆ ಕಾಫಿ ಕಾಯಿಗಳು ನೆಲಕ್ಕುದುರಿವೆ.  ಕಡೂರು, ತರೀಕೆರೆ ಭಾಗದಲ್ಲಿ ತರಕಾರಿ, ಈರುಳ್ಳಿ ಬೆಳೆಗಳಿಗೆ ಹಾನಿಯುಂಟಾಗಿದೆ.

***************

ಇಂದು ಕರಾವಳಿ ಜಿಲ್ಲೆಗಳಲ್ಲಿ ವ್ಯಾಪಕ ಮಳೆಯಾಗಿದೆ. ಉತ್ತರ ಹಾಗೂ ದಕ್ಷಿಣ ಒಳನಾಡಿನ ಕೆಲವು ಜಿಲ್ಲೆಗಳಲ್ಲಿ ಮಳೆಯಾಗಿದೆ.  ಗದಗದಲ್ಲಿ ೫ ಸೆಂಟಿ ಮೀಟರ್, ಬೆಂಗಳೂರು ಹೆಚ್.ಎ.ಎಲ್ ನಲ್ಲಿ ೩ ಸೆಂಟಿ ಮೀಟರ್ ಮಳೆಯಾಗಿದೆ. ಮೋಂಥಾ ಚಂಡಮಾರುತದ ಪ್ರಭಾವದಿಂದ ಕರಾವಳಿ ಜಿಲ್ಲೆಗಳಲ್ಲಿ ಇಂದಿನಿಂದ ಇನ್ನೆರಡು ದಿನಗಳ ಕಾಲ ವ್ಯಾಪಕ ಮಳೆಯಾಗಲಿದೆ. ಉತ್ತರ ಹಾಗೂ ದಕ್ಷಿಣ ಒಳನಾಡಿನಲ್ಲೂ ಇಂದು ಮತ್ತೆ ನಾಳೆ ಭಾರೀ ಮಳೆಯಾಗುವ ಸಂಭವವಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಡಾ. ಸಿ.ಎಸ್. ಪಾಟೀಲ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

**ಧ್ವನಿ : ಸಿ.ಎಸ್. ಪಾಟೀಲ್, ಹವಾಮಾನ ಇಲಾಖೆ ನಿರ್ದೇಶಕ ( 40 ಸೆಕೆಂಡುಗಳು)**

***************

ಅಂತಾರಾಷ್ಟ್ರೀಯ ಮಟ್ಟದ ಬ್ಯಾಡ್ಮಿಂಟನ್ ಪಂದ್ಯಾಟಕ್ಕೆ ಕಡಲ ತಡಿ ಮಂಗಳೂರು ಸಜ್ಜಾಗಿದೆ. ಇದೇ ಮೊದಲ ಬಾರಿಗೆ ಮಂಗಳೂರಿನಲ್ಲಿ ಆಯೋಜನೆಯಾಗಿರುವ 'ಚೀಫ್ ಮಿನಿಸ್ಟರ್ ಮಂಗಳೂರು ಇಂಡಿಯಾ ಇಂಟರ್‌ನ್ಯಾಷನಲ್ ಚಾಲೆಂಜ್ ೨೦೨೫-ಅಂತಾರಾಷ್ಟ್ರೀಯ ಬ್ಯಾಡ್ಮಿಂಟನ್ ಪಂದ್ಯಾವಳಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ. ನವೆಂಬರ್ ೨ರವರೆಗೆ ನಡೆಯಲಿರುವ ಈ ಪಂದ್ಯಾವಳಿಯಲ್ಲಿ  ಭಾರತ, ಅಮೆರಿಕ, ರಷ್ಯಾ, ಯುಎಇ, ಮಲೇಷ್ಯಾ, ಕೆನಡಾ ಇಂಡೋನೇಷ್ಯಾ, ಶ್ರೀಲಂಕಾ, ಥೈಲ್ಯಾಂಡ್, ಬಾಂಗ್ಲಾದೇಶ, ಸಿಂಗಾಪುರ, ಇಂಗ್ಲೆಂಡ್ ಸೇರಿದಂತೆ ೧೨ ದೇಶಗಳ ಸುಮಾರು ೪೫೦ಕ್ಕೂ ಅಧಿಕ ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ.

***************

ಯಾದಗಿರಿ ನಗರ ಹೊರ ವಲಯದಲ್ಲಿನ ಯಾದಗಿರಿ ವೈದ್ಯಕೀಯ ವಿಜ್ಞಾನ ಸಂಸ್ಥೆ ಹಾಗೂ ಬೋಧಕ ಆಸ್ಪತ್ರೆಯಲ್ಲಿ ಇದೇ ೩೦ರಂದು ಅಂಗವಿಕಲರು ಹಾಗೂ ಹಿರಿಯ ನಾಗರಿಕರಿಗೆ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿದೆ.

***************